## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕರ್ನಾಟಕ ಗ್ಯಾಸೆಟಿಯರ್ ಇಲಾಖೆಯ 2013-14ನೇ ಸಾಲಿನ ವಾರ್ಷಿಕ ಕ್ರಿಯಾಯೋಜನೆಗೆ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ: 1) ಸರ್ಕಾರಿ ಆದೇಶ ಸಂಖ್ಯೆ ಕಸಂವಾಪ್ರ 30 ಕೆಜಿಎಲ್ 2013, ದಿನಾಂಕ: 05.04.2013.

2) ಪತ್ರ ಸಂಖ್ಯೆ: ಕಗ್ಯಾಇ/ಸಿ(1)/2013-14, ದಿನಾಂಕ: 22.03.2013

ಪ್ರಸ್ತಾವನೆ:

ಕರ್ನಾಟಕ ಗ್ಯಾಸೆಟಿಯರ್ ಇಲಾಖೆಯ 2012-13 ನೇ ಸಾಲಿನ ಯೋಜನಾ ಕಾರ್ಯಕ್ರಮಗಳನ್ನು 2013-14ನೇ ಸಾಲಿನಲ್ಲಿ ಮುಂದುವರೆಸಲು ಮೇಲೆ (1)ರಲ್ಲಿ ಓದಲಾದ ಆದೇಶದಲ್ಲಿ ಸರ್ಕಾರದ ಮಂಜೂರಾತಿಯನ್ನು ನೀಡಲಾಗಿದೆ.

ಕರ್ನಾಟಕ ಗ್ಯಾಸೆಟಿಯರ್ ಇಲಾಖೆಯ 2013-14 ನೇ ಸಾಲಿನ ಮುಂದುವರೆದ ಹಾಗೂ ಹೊಸ ಯೋಜನಾ ಕಾರ್ಯಕ್ರಮಗಳಿಗೆ ಅನುಮೋದನೆ ನೀಡುವಂತೆ ಮುಖ್ಯ ಸಂಪಾದಕರು, ಕರ್ನಾಟಕ ಗ್ಯಾಸೆಟಿಯರ್ ಇಲಾಖೆ, ಇವರು ಮೇಲೆ (2) ರಲ್ಲಿ ಓದಲಾದ ಪತ್ರದಲ್ಲಿ ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿದೆ, ಅದರಂತೆ ಈ ಕೆಳಕಂಡ ಆದೇಶ.

**ಆದೇಶ ಸಂಖ್ಯೆ: ಕಸಂವಾ 12 ಕರಾಗೆ 2013**
**ಬೆಂಗಳೂರು, ದಿನಾಂಕ: 17.04.2013**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಕರ್ನಾಟಕ ಗ್ಯಾಸೆಟಿಯರ್ ಇಲಾಖೆಗೆ ಸಂಬಂಧಿಸಿದಂತೆ 2013-14 ನೇ ಸಾಲಿನಲ್ಲಿ ಹಮ್ಮಿಕೊಳ್ಳಲಾದ ಮುಂದುವರೆದ ಹಾಗೂ ಹೊಸ ಯೋಜನಾ ಕಾರ್ಯಕ್ರಮಗಳಿಗೆ ಅನುಬಂಧದಲ್ಲಿ ಸೂಚಿಸಿರುವಂತೆ ಈ ಕೆಳಕಂಡ ಷರತ್ತುಗಳೊಂದಿಗೆ ತಾತ್ವಿಕ ಅನುಮೋದನೆಯನ್ನು ನೀಡಲಾಗಿದೆ.

**ಷರತ್ತುಗಳು**

1. 2012-13 ನೇ ಸಾಲಿನಲ್ಲಿ ಹೊಸದಾಗಿ ಮಂಜೂರಾದ ಯೋಜನಾ ಕಾರ್ಯಕ್ರಮಗಳನ್ನು ಹಾಗೂ ಮುಂದುವರಿದ ಯೋಜನಾ ಕಾರ್ಯಕ್ರಮಗಳನ್ನು ಮಾತ್ರ ಮುಂದುವರೆಸಬೇಕು.
2. ಮುಂದುವರೆದ ಯೋಜನಾ ಕಾರ್ಯಕ್ರಮಗಳಲ್ಲಿ ಯಾವುದೇ ಹೊಸ ಘಟಕಗಳು ಅಥವಾ ಹೊಸ ಯೋಜನೆಗಳು ಒಳಗೊಂಡಿದಲ್ಲಿ ಅವುಗಳಿಗೆ ಪ್ರತ್ಯೇಕವಾದ ಪ್ರಸ್ತಾವನೆಗಳನ್ನು ಸಲ್ಲಿಸಿ ನಿಯಮಾನುಸಾರ ಮಂಜೂರಾತಿ ಪಡೆಯಬೇಕು.
3. ಹೊಸ ಸಂಸ್ಥೆಗಳಿಗೆ ಅಥವಾ ಅದೇ ಯೋಜನೆಯ ಹೊಸ ಪ್ರಕರಣಗಳಲ್ಲಿ ಒಳಗೊಂಡಿರುವ ಕೆಲಸಗಳಿಗೆ ಆಡಳತಾತ್ಮಕ ಅನುಮೋದನೆ ಮತ್ತು ಸಾಲ ಬಂಡವಾಳ ವೆಚ್ಚ ಸಹಾಯಧನ/ಸೋಡಿ ಮುಂತಾದವುಗಳ ಮಂಜೂರಾತಿ ಇವು ಆಯಾಯ ಬಾಬ್ತುಗಳಿಗೆ ಸಂಬಂಧಿಸಿದ ಪ್ರತ್ಯಾಯೋಜಿತ ಅಧಿಕಾರಗಳ ಪರಿಮಿತಿಯಲ್ಲಿರಬೇಕು.
4. ಆರ್ಥಿಕ ಇಲಾಖೆಯ ಮಿತವ್ಯಯ ಆದೇಶಗಳಿಗೆ ಒಳಪಡುವ ಸಿಬ್ಬಂದಿ ಸೃಜನೆ, ವಾಹನ ಮತ್ತು ಯಂತ್ರ ಸಾಮಗ್ರಿ ಖರೀದಿ, ಹೊಸ ಕಛೇರಿ ತೆರೆಯುವುದು,

Office of the Chief Editor
Karnataka Gazetteer Department, Bangalore
No. 3
Date 26/4/13

ಹೊಸ ಯೋಜನೆಗಳಿಗೆ ಮಂಜೂರಾತಿ, ಇವುಗಳಿಗೆ ಪ್ರತ್ಯೇಕವಾಗಿ ಆರ್ಥಿಕ ಇಲಾಖೆಯ ಹಾಗೂ ಯೋಜನಾ ಇಲಾಖೆಯ ಅನುಮೋದನೆಯನ್ನು ಪಡೆಯಲು ಪ್ರಸ್ತಾವನೆಗಳನ್ನು ಸಲ್ಲಿಸುವುದು.

5. ಕಾರ್ಯಕ್ರಮಗಳನ್ನು ಕಾರ್ಯಗತಗೊಳಸಲು ಜವಾಬ್ದಾರರಾದ ಅಧಿಕಾರಿಗಳು ಅವರಿಗೆ ನೀಡಲಾದ ಆರ್ಥಿಕ ಅಧಿಕಾರಕ್ಕೆ ಒಳಪಟ್ಟು ಯೋಜನಾ ಕಾರ್ಯಕ್ರಮಗಳನ್ನು ಕಾರ್ಯರೂಪಕ್ಕೆ ತರತಕ್ಕದ್ದು.

6. 1999ರ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ ಅಧಿನಿಯಮವನ್ನು ಹಾಗೂ ಅದರ ನಿಯಮಗಳು 2000 ವನ್ನು ಕಡ್ಡಾಯವಾಗಿ ಪಾಲಿಸುವುದು.

........

ಈ ಆದೇಶವನ್ನು ಆರ್ಥಿಕ ಇಲಾಖೆಯು ಆದೇಶ ಸಂಖ್ಯೆ: ಎಫ್‌ಡಿ 1 ಟಿಎಫ್‌ಪಿ 96 ದಿನಾಂಕ: 10.07.1996ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ಪ್ರದತ್ತವಾದ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಜಿ.ಬಿ.ಹೇಮಣ್ಣ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಇಲಾಖೆ
(ಆಡಳಿತ ಕನ್ನಡ)

ಇವರಿಗೆ :-

1) ಮಹಾಲೇಖಪಾಲರು (ಎ&ಇ) ಕರ್ನಾಟಕ, ಬೆಂಗಳೂರು
2) ಮುಖ್ಯ ಸಂಪಾದಕರು ಕರ್ನಾಟಕ ಗ್ಯಾಸೆಟಿಯರ್ ಇಲಾಖೆ, ಕಾವೇರಿ ಭವನ, ಬೆಂಗಳೂರು.
3) ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ವಿಕಾಸಸೌಧ, ಬೆಂಗಳೂರು. ಇವರಿಗೆ 10 ಪ್ರತಿಗಳು
4) ಮಾನ್ಯ ಸಣ್ಣ ನೀರಾವರಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
5) ಆಂತರಿಕ ಆರ್ಥಿಕ ಸಲಹೆಗಾರರು, ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
6) ನಿರ್ದೇಶಕರು ಜನಶಕ್ತಿ ಮತ್ತು ಉದ್ಯೋಗ ವಿಭಾಗ, ಯೋಜನಾ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
7) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-7), ವಿಧಾನ ಸೌಧ, ಬೆಂಗಳೂರು.
8) ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಇಲಾಖೆ, ವಿಕಾಸ ಸೌಧ, ಬೆಂಗಳೂರು.
9) ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಇಲಾಖೆ, ವಿಕಾಸ ಸೌಧ, ಬೆಂಗಳೂರು
10) ಸಮನ್ವಯ ಶಾಖೆ/ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

ಸರ್ಕಾರದ ಆದೇಶ ಸಂಖ್ಯೆ: ಕಸಂವಾ 12 ಕರಾಗೆ 2013, ಬೆಂಗಳೂರು,
ದಿನಾಂಕ: 17.04.2013 ಕ್ಕೆ ಅನುಬಂಧ

2013-14ನೇ ಸಾಲಿನ ಮುಂದುವರೆದ ಯೋಜನಾ ಕಾರ್ಯಕ್ರಮಗಳ ಘೋಷ್ವಾರೆ.

| ಕ್ರಮಸಂಖ್ಯೆ | ಲೆಕ್ಕಶೀರ್ಷಿಕೆ | ಯೋಜನೇತರ | ಯೋಜನೆ |
|---|---|---|---|
| 1. | 3454-02-110-0-01-059 ಜಿಲ್ಲಾ ಗ್ಯಾಸೆಟಿಯರ್‌ಗಳ ಪರಿಷ್ಕರಣೆ (Revision of District Gazetteer) (ಇತರೆ ಖರ್ಚುಗಳು) | | 17.07 |
| ಅ) | ವಿಶೇಷ ಘಟಕ ಯೋಜನೆ | | 2.05 |
| ಆ) | ಗಿರಿಜನ ಉಪಯೋಜನೆ | | 0.88 |
| | ಒಟ್ಟು | | 20.00 |

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಜಿ.ಬಿ.ಹೇಮಣ್ಣ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಇಲಾಖೆ
(ಆಡಳಿತ ಕನ್ನಡ)

**ಸರ್ಕಾರದ ಆದೇಶ ಸಂಖ್ಯೆ: ಕಸಂವಾ 12 ಕರಾಗೆ 2013, ಬೆಂಗಳೂರು,**
**ದಿನಾಂಕ: 17.04.2013 ಕ್ಕೆ ಅನುಬಂಧ**
**ಕರ್ನಾಟಕ ಗ್ಯಾಸೆಟಿಯರ್ ಇಲಾಖೆ**
**2013-14ನೇ ಸಾಲಿನ ಮುಂದುವರೆದ ಯೋಜನಾ ಕಾರ್ಯಕ್ರಮಗಳ ಘೋಷ್ವಾರೆ.**

| ಕ್ರಮ ಸಂಖ್ಯೆ | ಹಮ್ಮಿಕೊಳ್ಳಲಾದ ಉದ್ದೇಶಿತ ಕಾರ್ಯಕ್ರಮಗಳು | ಆಯವ್ಯಯದಲ್ಲಿ ಒದಗಿಸಲಾದ ಅನುದಾನ (ರೂ. ಲಕ್ಷಗಳಲ್ಲಿ) |
|---|---|---|
| 1. | ತುಮಕೂರು ಜಿಲ್ಲಾ ಗ್ಯಾಸೆಟಿಯರ್ ಕನ್ನಡ ಆವೃತ್ತಿಯ ಸಂಪಾದನೆ ಮತ್ತು ಮುದ್ರಣ | 3.00 |
| 2. | ಬೀದರ್ ಜಿಲ್ಲಾ ಗ್ಯಾಸೆಟಿಯರ್ ಆಂಗ್ಲ ಆವೃತ್ತಿಯ ಸಂಪಾದನೆ ಮತ್ತು ಮುದ್ರಣ | 3.00 |
| 3. | "ಎ ಹ್ಯಾಂಡ್ ಬುಕ್ ಆಫ್ ಕರ್ನಾಟಕ" ಆಂಗ್ಲ ಆವೃತ್ತಿಯ ಸಂಪಾದನೆ ಮತ್ತು ಮುದ್ರಣ | 5.50 |
| 4. | ತಾಲ್ಲೂಕು ಗ್ಯಾಸೆಟಿಯರ್ ಸಂಪಾದನೆ ಮತ್ತು ಪುಟವಿನ್ಯಾಸ<br>1) ಚಿತ್ರದುರ್ಗ ಜಿಲ್ಲೆಯ 6 ತಾಲ್ಲೂಕುಗಳು<br>2) ದಾವಣಗೆರೆ ಜಿಲ್ಲೆಯ 6 ತಾಲ್ಲೂಕುಗಳು<br>3) ಕೊಪ್ಪಳ ಜಿಲ್ಲೆಯ 4 ತಾಲ್ಲೂಕುಗಳು | 2.10 |
| 5. | ರಾಜ್ಯ ಗೆಜೆಟಿಯರ್/ಜಿಲ್ಲಾ ಗೆಜೆಟಿಯರ್/ತಾಲ್ಲೂಕು ಗೆಜೆಟಿಯರ್ ಅಧ್ಯಾಯಗಳ ಸಂಭಾವನೆ ಪಾವತಿ | 1.47 |
| 6. | ಮುಂದುವರೆದ ಯೋಜನೆಗಳಗಾಗಿ ಅಂತಿಮ ಬಿಲ್ ಪಾವತಿ | 1.50 |
| 7. | ಇ-ಆಡಳಿತ ವೆಚ್ಚ | 0.50 |
| | ಒಟ್ಟು ಮೊತ್ತ. | 17.07 |

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಜಿ.ಬಿ.ಹೇಮಣ್ಣ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಇಲಾಖೆ
(ಆಡಳಿತ ಕನ್ನಡ)

**ಸರ್ಕಾರದ ಆದೇಶ ಸಂಖ್ಯೆ: ಕಸಂವಾ 12 ಕರಾಗೆ 2013, ಬೆಂಗಳೂರು,**
**ದಿನಾಂಕ: 17.04.2013 ಕ್ಕೆ ಅನುಬಂಧ**
**ಕರ್ನಾಟಕ ಗ್ಯಾಸೆಟಿಯರ್ ಇಲಾಖೆ**
**2013-14ನೇ ಸಾಲಿಗೆ ಹೊಸ ಯೋಜನೆಯಡಿ ಕರ್ನಾಟಕ ಗೆಜೆಟಿಯರ್ ಇಲಾಖೆಯು ಪರಿಶಿಷ್ಟ ಜಾತಿ ಉಪಯೋಜನೆ/ಗಿರಿಜನ ಉಪಯೋಜನೆಯಡಿ ಹಮ್ಮಿಕೊಂಡಿರುವ ಕಾರ್ಯಕ್ರಮಗಳು.**

| ಕ್ರಮ ಸಂಖ್ಯೆ | ಹಮ್ಮಿಕೊಳ್ಳಲಾದ ಉದ್ದೇಶಿತ ಕಾರ್ಯಕ್ರಮಗಳು | ಆಯವ್ಯಯದಲ್ಲಿ ಒದಗಿಸಲಾದ ಅನುದಾನ (ರೂ. ಲಕ್ಷಗಳಲ್ಲಿ) |
|---|---|---|
| 1. | ಗಿರಿಜನ ಉಪಯೋಜನೆ ಅಡಿಯಲ್ಲಿ ತುಮಕೂರು ಹಾಗೂ ಬೀದರ್ ಜಿಲ್ಲಾ ಗೆಜೆಟಿಯರ್‌ನಲ್ಲಿ ಬುಡಕಟ್ಟು ಜನಾಂಗದ ಬಗ್ಗೆ ವಿಶೇಷ ಲೇಖನ ಅಳವಡಿಸಲು ಹಾಗೂ ತುಮಕೂರು ಮತ್ತು ಬೀದರ್ ಜಿಲ್ಲಾ ಗೆಜೆಟಿಯರ್‌ಗಳನ್ನು ಮುದ್ರಿಸಿ ಮೇಲ್ಕಂಡ ಜಿಲ್ಲೆಗಳಲ್ಲಿರುವ ವಿದ್ಯಾರ್ಥಿ ನಿಲಯಗಳಿಗೆ ಉಚಿತ ವಿತರಣೆಗಾಗಿ. | 0.88 |
| 2. | ವಿಶೇಷ ಘಟಕ ಯೋಜನೆ ಅಡಿ ತುಮಕೂರು ಮತ್ತು ಬೀದರ್ ಜಿಲ್ಲೆಗಳಲ್ಲಿ ಇರುವ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದವರ ಬಗ್ಗೆ ವಿಶೇಷ ಲೇಖನ ಅಳವಡಿಸಲು ಹಾಗೂ ಉಳಿದ ಅನುದಾನದಲ್ಲಿ ತುಮಕೂರು ಮತ್ತು ಬೀದರ್ ಜಿಲ್ಲಾ ಗೆಜೆಟಿಯರ್‌ಗಳನ್ನು ಮುದ್ರಿಸಿ ವಿದ್ಯಾರ್ಥಿ ನಿಲಯಗಳಿಗೆ ಉಚಿತ ವಿತರಣೆಗಾಗಿ. | 2.05 |

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಜಿ.ಬಿ.ಹೇಮಣ್ಣ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಇಲಾಖೆ
(ಆಡಳಿತ ಕನ್ನಡ)